ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

2019ನೇ ಸಾಲಿನಲ್ಲಿ ಉಂಟಾದ ಪ್ರಕೃತಿ ವಿಕೋಪದಿಂದ ಉಂಟಾದ ನಷ್ಟದ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

184 (264) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019ನೇ ಸಾಲಿನ ಜುಲೈ ಮತ್ತು ಆಗಸ್ಟ್ ತಿಂಗಳುಗಳಲ್ಲಿ ಸುರಿದ ಭಾರೀ ಮಳೆಯಿಂದ ಹಾಸನ ಜಿಲ್ಲೆಯಲ್ಲಿ ಉಂಟಾಗಿರುವ ಭೂ ಕುಸಿತ, ರಸ್ತೆ ಹಾನಿ, ಬೆಳೆ ಹಾನಿ, ಪ್ರಾಣ ಹಾನಿ ಪ್ರಕರಣಗಳೆಷ್ಟು; ಈ ಪ್ರಕರಣಗಳಿಂದ ಉಂಟಾಗಿರುವ ನಷ್ಟದ ಅಂದಾಜು ಮೊತ್ತವೆಷ್ಟು; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಆಸ್ತಿ ಹಾನಿ, ಬೆಳೆ ಹಾನಿ, ಪ್ರಾಣ ಹಾನಿಯಿಂದ ಉಂಟಾಗಿರುವ ನಷ್ಟಗಳನ್ನು ಸಂತ್ರಸ್ಥರಿಗೆ ಭರಿಸಲು ಸರ್ಕಾರವು ನಿಗದಿಪಡಿಸಿರುವ ಪರಿಹಾರ ಮೊತ್ತವೆಷ್ಟು; ಈ ಪ್ರಕರಣಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಸಂತ್ರಸ್ಥರಿಗೆ ಇದುವರೆಗೆ ನೀಡಿದ ಪರಿಹಾರವೆಷ್ಟು; (ಪ್ರಕರಣವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಪ್ರಕೃತಿ ವಿಕೋಪದಿಂದುಂಟಾದ ಹಾನಿಯನ್ನು ಪರಿಶೀಲಿಸಲು ನೇಮಕ ಮಾಡಿರುವ ಪರಿಣಿತರ ತಂಡಗಳ ವಿವರವೇನು? (ಇವರು ನೀಡಿರುವ ವರದಿಯ ವಿವರಗಳನ್ನು ಒದಗಿಸುವುದು)